## ಜೆ.ಎಸ್.ಎಸ್ ಪಬ್ಲಿಕ್ ಶಾಲೆ, ಬನಶಂಕರಿ 2ನೇ ಹಂತ, ಬೆಂಗಳೂರು–70

### ಪರಮ ಪೂಜ್ಯ ಜಗದ್ಗುರು ಡಾ. ಶ್ರೀ. ಶ್ರೀ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ೧೦೭ನೆಯ ಜಯಂತಿ ವರದಿ.

### ಗುರುವಂದನಾ ಕಾರ್ಯಕ್ರಮ

**ದಿನಾಂಕ : ೦೮–೦೯–೨೦೨೨**

ರಾಜಗುರುತಿಲಕ ಪರಮ ಪೂಜ್ಯ ಜಗದ್ಗುರು ಡಾ. ಶ್ರೀ. ಶ್ರೀ. ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ೧೦೭ನೆಯ ಜಯಂತಿ ಮಹೋತ್ಸವವನ್ನು ದಿನಾಂಕ– ೦೮/೦೯/೨೦೨೨ ರಂದು ಶಾಲೆಯ 'ಘನಲಿಂಗಶಿವಯೋಗಿ ಸಭಾಭವನ' ದಲ್ಲಿ ಶ್ರದ್ಧಾಭಕ್ತಿಗಳಿಂದ ಆಚರಿಸಲಾಯಿತು. ಶಾಲೆಯ ಸಂಸ್ಕೃತ ಶಿಕ್ಷಕರಾದ ಶ್ರೀ ಕೃಷ್ಣಮೂರ್ತಿ ಅವರು ಪೂಜಾ ಕಾರ್ಯಕ್ರಮವನ್ನು ನೆರವೇರಿಸಿಕೊಟ್ಟರು. ಈ ಸಮಾರಂಭದಲ್ಲಿ ಜೆ.ಎಸ್.ಎಸ್. ಕೇಂದ್ರೀಯ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಗೌರಿ ಬಿ. ನಟರಾಜರವರು ಅಧ್ಯಕ್ಷತೆಯನ್ನು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಜಸ್ಟೀಸ್‌ನ ಸಂಯೋಜನಾಧಿಕಾರಿಗಳಾದ ಶ್ರೀ ಲೋಲಕುಮಾರ್ ಎಸ್. ಅವರು ಪಾಲ್ಗೊಂಡಿದ್ದರು.

ಶಾಲೆಯ 'ಹಿರಣ್ಮಯಿ' ಮತ್ತು 'ಅನುಷ್ಕ'ರವರ ಪ್ರಾರ್ಥನಾ ನೃತ್ಯದೊಂದಿಗೆ ಕಾರ್ಯಕ್ರಮ ಆರಂಭವಾಯಿತು. ವಿದ್ಯಾರ್ಥಿನಿ ಕುಮಾರಿ 'ಹರ್ಷಿತ' ಹತ್ತನೇ ತರಗತಿ ಇವರು ಸ್ವಾಗತ ಕೋರಿದರು. ನಂತರ ೧೦ನೆಯ ತರಗತಿಯ ವಿದ್ಯಾರ್ಥಿನಿ ಕುಮಾರಿ 'ಕವನ' ಮುಖ್ಯ ಅತಿಥಿಗಳ ಪರಿಚಯ ಮಾಡಿದರು. ಮುಖ್ಯ ಅತಿಥಿಗಳಾದ ಶ್ರೀ ಲೋಲಕುಮಾರ್ ಎಸ್. ಹಾಗೂ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಗೌರಿ ಬಿ. ನಟರಾಜರವರು ದೀಪ ಬೆಳಗಿಸುವುದರ ಮೂಲಕ ಸಮಾರಂಭವನ್ನು ಉದ್ಘಾಟಿಸಿದರು.

ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ವಿಜಯ ರಾಮಚಂದ್ರರವರು ಸ್ವತಂತ್ರ ಪೂರ್ವದಲ್ಲಿಯೇ ತ್ರಿವಿಧ ದಾಸೋಹ ಸೇವೆ ಆರಂಭಿಸಿದ ಶ್ರೀಗಳ ತ್ಯಾಗ, ಮಾತೃತ್ವ ಶಕ್ತಿ, ಸೇವಾ ಮನೋಭಾವ, ಪ್ರಾಮಾಣಿಕತೆಗಳ ಬಗ್ಗೆ ತಿಳಿಸಿ 'ನುಡಿನಮನ' ಸಲ್ಲಿಸಿದರು.

ಶಾಲೆಯ ಹಿರಿಯ ಮತ್ತು ಕಿರಿಯ ವಿದ್ಯಾರ್ಥಿ ಗಾಯನ ತಂಡದವರು ತಮ್ಮ ಸುಮಧುರ ವಚನಗಾಯನದ ಮೂಲಕ 'ಗೀತನಮನ' ಸಲ್ಲಿಸಿದರು. ಈ ಕಾರ್ಯಕ್ರಮದಲ್ಲಿ ಶಾಲೆಯ ವಿದ್ಯಾರ್ಥಿಗಳು ವಿವಿಧ ಮನರಂಜನಾ ಕಾರ್ಯಕ್ರಮಗಳನ್ನು ನೀಡಿದರು. ಹತ್ತನೇ ತರಗತಿಯ 'ಅಖಿಲೇಶ್' ಅಪೂರ್ವವಾದ 'ಲಿಂಗಾಷ್ಟಕಂ' ಗೀತೆಯನ್ನು ಕೀ ಬೋರ್ಡ್‌ನ ಮೂಲಕ ಪ್ರಸ್ತುತ ಪಡಿಸಿದರು. ೨೦೧೯–೨೦ ನೇ ಸಾಲಿನಲ್ಲಿ ನಡೆಸಲಾದ ಸಾಮಾನ್ಯ ಜ್ಞಾನ ಪರೀಕ್ಷೆ, ಸೆಂಟ್ರಲ್ ಮೆರಿಟ್ ಸ್ಕಾಲರ್‌ಶಿಪ್ ಹಾಗೂ ಸ್ವಾತಂತ್ರ್ಯ ಪಡೆದ ಅಮೃತ ಮಹೋತ್ಸವದ ಅಂಗವಾಗಿ ನಡೆಸಲಾದ ಕೆಲವು ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿ ವೃಂದಕ್ಕೆ ಮುಖ್ಯ ಅತಿಥಿಗಳು ಬಹುಮಾನ ವಿತರಿಸಿದರು. ಮುಖ್ಯ ಅತಿಥಿಗಳು ರಾಜೇಂದ್ರ ಶ್ರೀಗಳು ತಮ್ಮ ಸೇವಾ ಅವಧಿಯಲ್ಲಿ ಸಮಾಜಮುಖಿಯಾಗಿ ತೆಗೆದುಕೊಂಡ ಪ್ರಮುಖ ನಿರ್ಧಾರಗಳ ಬಗೆಗಿನ ಕೆಲವು ಸನ್ನಿವೇಶಗಳನ್ನು ಮನಮುಟ್ಟುವಂತೆ ತಿಳಿಸಿದರು. ನಂತರ ಒಂದು ತಿಲ್ಲಾನ ನೃತ್ಯರೂಪಕವನ್ನು ಪ್ರಸ್ತುತ ಪಡಿಸಲಾಯಿತು.

ಈ ಸಮಾರಂಭದಲ್ಲಿ ಶಾಲೆಯ ಎಲ್ಲ ಶಿಕ್ಷಕ ಮತ್ತು ಶಿಕ್ಷಕೇತರ ವರ್ಗ, ವಿದ್ಯಾರ್ಥಿವೃಂದ ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು. ವಿದ್ಯಾರ್ಥಿನಿಯರಾದ 'ಮನಸ್ವಿ' ಮತ್ತು 'ರಿಷಾ' ಹತ್ತನೇ ತರಗತಿ, ಇವರು ಕಾರ್ಯಕ್ರಮ ನಿರೂಪಣೆ ಮಾಡಿದರು. ಅಂತಿಮವಾಗಿ ಹತ್ತನೆಯ ತರಗತಿಯ 'ನಿನಾದ್' ವಂದನಾರ್ಪಣೆ ಸಲ್ಲಿಸಿದರು. ಹೀಗೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಪ್ರದರ್ಶಿಸಲಾಯಿತು. ಶಾಲೆಯ ಎಲ್ಲ ವಿದ್ಯಾರ್ಥಿ ವೃಂದಕ್ಕೂ ಸಿಹಿ ಹಂಚಲಾಯಿತು. ಒಟ್ಟಾರೆ ಪೂರ್ಣ ಕಾರ್ಯಕ್ರಮವು ಸ್ಮರಣೀಯ, ಅರ್ಥಪೂರ್ಣವಾಗಿದ್ದು ಮನೋರಂಜನೀಯವಾಗಿತ್ತು.

********************************

## ಜೆ.ಎಸ್.ಎಸ್ ಪಬ್ಲಿಕ್ ಶಾಲೆ, ಬನಶಂಕರಿ 2ನೇ ಹಂತ, ಬೆಂಗಳೂರು–70

**ಪರಮ ಪೂಜ್ಯ ಜಗದ್ಗುರು ಡಾ. ಶ್ರೀ. ಶ್ರೀ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ೧೦೭ನೆಯ ಜಯಂತಿ ಪ್ರಯುಕ್ತ**

**‘ಸಂಸ್ಥಾಪಕರ ದಿನಾಚರಣೆ– ವಚನ ದಿನ’**

**ದಿನಾಂಕ : ೨೯–೦೮–೨೦೨೨**

ಬೆಂಗಳೂರು ನಗರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ವತಿಯಿಂದ ಪರಮ ಪೂಜ್ಯ ಜಗದ್ಗುರು ಶ್ರೀ. ಶ್ರೀ. ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜಯಂತಿ ಮಹೋತ್ಸವದ ಅಂಗವಾಗಿ ಬೆಂಗಳೂರಿನ ೨೨ ವಿಧಾನಸಭಾ ಕ್ಷೇತ್ರಗಳಲ್ಲಿ ‘ಸಂಸ್ಥಾಪಕರ ದಿನಾಚರಣೆ– ವಚನ ದಿನ’ ಎಂಬುದಾಗಿ ಆಗಸ್ಟ್ ೨೯, ೨೦೨೨ರಂದು ಅರ್ಥಪೂರ್ಣವಾಗಿ ಆಚರಿಸಲಾಯಿತು. ಇದರ ಪ್ರಯುಕ್ತ ನಮ್ಮ ಶಾಲೆಯಲ್ಲಿ ನಡೆಸಲಾದ ವಚನ ಗಾಯನ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಮಾರಂಭದಲ್ಲಿ ಜೆ.ಎಸ್.ಎಸ್. ಕೇಂದ್ರೀಯ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಗೌರಿ ಬಿ. ನಟರಾಜರವರು ಅಧ್ಯಕ್ಷತೆಯನ್ನು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶ್ರೀಮತಿ ಗೀತಾ ಜಯಂತ್, ಪ್ರಧಾನ ಕಾರ್ಯದರ್ಶಿಗಳು, ಬೆಂಗಳೂರು ನಗರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಇವರು ಭಾಗವಹಿಸಿ ವಿಜೇತರಿಗೆ ಬಹುಮಾನ ವಿತರಿಸಿ ಪ್ರೋತ್ಸಾಹಿಸಿದರು.

******************************